ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕಾವೇರಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 12/6/2020

# ತಮಿಳುನಾಡಿಗೆ 31.24 ಟಿಎಂಸಿ ಕಾವೇರಿ ನೀರು?

ಉವಾ: 12.6.2020

## ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಸೂಚನೆ

**ಚೆನ್ನೈ/ನವದೆಹಲಿ:** ತಮಿಳುನಾಡಿಗೆ ಹಾಲಿ ತಿಂಗಳು ಮತ್ತು ಜುಲೈಗೆ ಅನ್ವಯವಾಗುವಂತೆ 31.24 ಟಿಎಂಸಿ ನೀರು ಬಿಡುವಂತೆ ಕರ್ನಾಟಕಕ್ಕೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಸೂಚಿಸಿದೆ.

ಎಲ್ಲಕ್ಕಿಂತ ಹೆಚ್ಚಾಗಿ ಮೇಕೆದಾಟುವಿನಲ್ಲಿ ಕರ್ನಾಟಕ ನಿರ್ಮಿಸಲು ಉದ್ದೇಶಿಸಿರುವ ಅಣೆಕಟ್ಟು 'ಯೋಜನೆಯ ಬಗ್ಗೆ ತಮಿಳು ನಾಡು ಮತ್ತು ಪುದುಚೇರಿ ಸರ್ಕಾರದ ಪ್ರತಿನಿಧಿಗಳು ಪ್ರಬಲ ವಿರೋಧ ವ್ಯಕ್ತಪಡಿಸಿದರು. ಹೀಗಾಗಿ, ಬುಧವಾರ ನವದೆಹಲಿಯಲ್ಲಿ ನಡೆದ ಸಭೆಯಲ್ಲಿ ಈ ಬಗ್ಗೆ ಚರ್ಚೆ ನಡೆಸಲು ಸಾಧ್ಯವಾಗಲಿಲ್ಲ.

ಮೇಕೆದಾಟು ಅಣೆಕಟ್ಟು ನಿರ್ಮಾಣ ವಿಚಾರವನ್ನು ಸಭೆಯಲ್ಲಿ ಪರಿಗಣಿಸಲೇ ಬಾರದು ಎಂದು ತಮಿಳುನಾಡು ಮುಖ್ಯಮಂತ್ರಿ ಎಡಪ್ಪಾಡಿ ಕೆ.ಪಳನಿಸ್ವಾಮಿ ಕೆಲ ದಿನಗಳ ಹಿಂದೆ ಕೇಂದ್ರ ಜಲಶಕ್ತಿ ಖಾತೆ ಸಚಿವಾಲಯಕ್ಕೆ ಪತ್ರ ಬರೆದು ಒತ್ತಾಯಿಸಿದ್ದರು. ದೇಶಾದ್ಯಂತ ಕೊರೊನಾ ಸ್ಥಿತಿ ಹಿನ್ನೆಲೆಯಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ 2018ರಲ್ಲಿ ರಚನೆಗೊಂಡ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಸಭೆ ನಡೆಯಿತು. ಕರ್ನಾಟಕದ ಜಲಸಂಪನ್ಮೂಲ ಇಲಾಖೆ ಅಧಿಕಾರಿಗಳು, ಪ್ರಾಧಿಕಾರದ ಸದಸ್ಯ ನವೀನ್ ಕುಮಾರ್ ಸಭೆಯಲ್ಲಿ ಪಾಲ್ಗೊಂಡಿದ್ದರು.



- ಜೂನ್-ಜುಲೈ ತಿಂಗಳಲ್ಲಿ ಅನ್ವಯವಾಗುವಂತೆ ನಿರ್ಧಾರ
- ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ವಿಡಿಯೋ ಕಾನ್ಫರೆನ್ಸ್‌ನಲ್ಲಿ ನಿರ್ಧಾರ